# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 233(229) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 12.08.2025 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಉದ್ದಿಮೆದಾರರಿಗೆ ಕೈಗಾರಿಕೆ ಇಲಾಖೆಯಿಂದ ನೀಡುತ್ತಿರುವ ಅನುಕೂಲಗಳೇನು; | ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಅಭಿವೃದ್ಧಿಪಡಿಸಿರುವ ಕೈಗಾರಿಕಾ ಪ್ರದೇಶಗಳಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ಉದ್ದಿಮೆದಾರರಿಗೆ ದಿನಾಂಕ:21-03-2009 ರಿಂದ ಹಂಚಿಕೆ ಪ್ರದೇಶದ ಶೇ.22.65 ರಷ್ಟು ಜಮೀನನ್ನು ಮೀಸಲಿಟ್ಟು ಹಂಚಿಕೆ ಮಾಡಿರುತ್ತದೆ ಹಾಗೂ ದಿನಾಂಕ:09-06-2022 ರಿಂದ ಶೇ.24.10 ರಷ್ಟು ಜಮೀನನ್ನು ಮೀಸಲಿಟ್ಟು ಹಂಚಿಕೆ ಮಾಡಲಾಗುತ್ತಿದೆ.<br><br>ಅದೇ ರೀತಿ ಸರ್ಕಾರದ ಆದೇಶ ಸಂಖ್ಯೆ: ಸಿಐ 78 ಎಸ್.ಪಿ.ಕ್ಯೂ. 2021; ದಿನಾಂಕ:05.02.2024 ರಲ್ಲಿ ನಾಗರಿಕ ಸೌಲಭ್ಯ ನಿವೇಶನಗಳ ಹಂಚಿಕೆಯಲ್ಲಿಯೂ ಸಹ ಈ ವರ್ಗದವರಿಗೆ ಶೇ.24.10 ಮೀಸಲಾತಿ ಒದಗಿಸಲಾಗಿದೆ.<br><br>ಕೈಗಾರಿಕಾ ಪ್ರದೇಶಗಳಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ಉದ್ದಿಮೆದಾರರಿಗೆ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 76 ಎಸ್ಎಸ್ಐ 2019 ದಿನಾಂಕ: 28-05-2020 ಮತ್ತು ಸರ್ಕಾರದ ಆದೇಶ ಸಂಖ್ಯೆ: ಸಿಐ 76 ಎಸ್ಎಸ್ಐ 2019 ದಿನಾಂಕ:16-02-2021 ರ ಆದೇಶಗಳನ್ವಯ ದಿನಾಂಕ: 01-04-2019 ರಿಂದ ಅನ್ವಯವಾಗುವಂತೆ, ಹಂಚಿಕೆ ಮೊತ್ತದ ಮೇಲೆ ಶೇ.75 ರಷ್ಟು ರಿಯಾಯಿತಿ ನೀಡಿ, ನಿವೇಶನ ಹಂಚಿಕೆ ಮಾಡಲಾಗುತ್ತಿದೆ. |
| ಆ. | ಈ ವರ್ಗದ ಉದ್ದಿಮೆದಾರರು ಎದುರಿಸುತ್ತಿರುವ ಸಮಸ್ಯೆಗಳನ್ನು ಸರ್ಕಾರ ಮನಗಂಡಿದೆಯೇ; | ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ಉದ್ದಿಮೆದಾರರಿಗೆ ಮಂಡಳಿಯಲ್ಲಿ ನಿವೇಶನ ಹಂಚಿಕೆಗೆ ಸಂಬಂಧಿಸಿದಂತೆ ಕುಂದು-ಕೊರತೆಗಳು, ಬೇಡಿಕೆಗಳಿದ್ದಲ್ಲಿ ಕಾಲ-ಕಾಲಕ್ಕೆ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ಉದ್ದಿಮೆದಾರರ ಸಂಘದ ಜೊತೆ ಸಭೆ ನಡೆಸಿ ಸಮಸ್ಯೆಗಳನ್ನು ಬಗೆಹರಿಸಲು ಕ್ರಮವಹಿಸಲಾಗುತ್ತಿದೆ. |
| ಇ. | ಹಾಗಿದಲ್ಲಿ, ಇವರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು? | |

**ಸಂಖ್ಯೆ: ಸಿಐ 416 ಐಎಪಿ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು